ಕರ್ನಾಟಕ ಸರ್ಕಾರ

*ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.*

ಸಂಖ್ಯೆ:ಪಪೂಶಿ/ಶೈಶಾ-04/ದಾ.ಕು/2018-19 ದಿನಾಂಕ 25-05-2018.

# ಸುತ್ತೋಲೆ

ವಿಷಯ: ಪದವಿ ಪೂರ್ವ ಕಾಲೇಜುಗಳಲ್ಲಿ ದಾಖಲಾತಿ ಕುರಿತು.

ಉಲ್ಲೇಖ: 2018-19ನೇ ಸಾಲಿನ ದಾಖಲಾತಿ ಕೈಪಿಡಿ ಮಾರ್ಗಸೂಚಿ ಕುರಿತು.

ಮೇಲಿನ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ರಾಜ್ಯದ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ಹಾಗೂ ದ್ವಿತೀಯ ಪಿಯುಸಿಗೆ ದಾಖಲಾಗುವ ವಿದ್ಯಾರ್ಥಿಗಳಿಗೆ ರೋಸ್ಟರ್‌ವಾರು ಮೆರಿಟ್ ಲಿಸ್ಟ್ ಹಾಗೂ ವಿದ್ಯಾರ್ಥಿಗಳಿಂದ ಪದವಿ ಪೂರ್ವ ಶಿಕ್ಷಣ ಇಲಾಖೆ ಕೈಪಿಡಿ ಪ್ರಕಾರ ಪಡೆಯುವ ಶುಲ್ಕಗಳ ವಿವರಗಳನ್ನು ಕಾಲೇಜುಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಲಾಗಿತ್ತು.

ಅದರಂತೆ ತಮ್ಮ ಜಿಲ್ಲಾ ವ್ಯಾಪ್ತಿಗೆ ಬರುವ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳು ಹಾಗೂ ಆಡಳಿತ ಮಂಡಳಿಯವರು ತೆಗೆದುಕೊಂಡಿರುವ ಕ್ರಮವನ್ನು ಕುರಿತು ಖುದ್ದಾಗಿ ಕಾಲೇಜುಗಳಿಗೆ ಭೇಟಿ ನೀಡಿ ಪರಿಶೀಲಿಸಿ ವರದಿಯನ್ನು ಮರುಟಪಾಲಿನಲ್ಲಿ ಜಂಟಿ ನಿರ್ದೇಶಕರು(ಶೈಕ್ಷಣಿಕ) ಪದವಿ ಪೂರ್ವ ಶಿಕ್ಷಣ ಇಲಾಖೆ ರವರಿಗೆ ಸಲ್ಲಿಸಲು ಸೂಚಿಸಿದೆ

25/5/18

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು:-

1. ರಾಜ್ಯದ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ- ಜಿಲ್ಲಾ ವ್ಯಾಪ್ತಿಗೆ ಒಳಪಡುವ ಪದವಿ ಪೂರ್ವ ಕಾಲೇಜುಗಳಿಗೆ ಖುದ್ದು ಭೇಟಿ ನೀಡಲು-ಮುಂದಿನ ಕ್ರಮಕ್ಕಾಗಿ
2. ನಿರ್ದೇಶಕರ ಆಪ್ತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ಮಾಹಿತಿಗಾಗಿ.
3. ಇ-ಆಡಳಿತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ವೆಬ್‌ಸೈಟ್‌ನಲ್ಲಿ ಅಳವಡಿಸಲು ಮುಂದಿನ ಕ್ರಮಕ್ಕಾಗಿ.
4. ಕಛೇರಿ ಪ್ರತಿ